Office of the Commissioner
No............
Dt. 17 MAR 2021
Health & FWS, B'lore

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಬೆಂಗಳೂರಿನ ಕೆ.ಸಿ.ಜನರಲ್ ಆಸ್ಪತ್ರೆಯಲ್ಲಿ ಶ್ರೀ ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆಯ ಸಹಭಾಗಿತ್ವದಲ್ಲಿ ಕ್ಯಾತ್‌ಲ್ಯಾಬ್ ಅನ್ನು ಪ್ರಾರಂಭಿಸುವ ಬಗ್ಗೆ.

ಓದಲಾಗಿದೆ:-

1. 2020-21 ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ-114.
2. ಪ್ರಧಾನ ಇಂಜಿನಿಯರ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಪತ್ರ ಸಂಖ್ಯೆ: ಆಕುಕ/ಇಂ.ಘ/ಪ್ರ.ಇಂ./ತಾಂ.ಸ-3/ಸ.ಇಂ.-6/2020-21/3694 ದಿನಾಂಕ: 3-3-2021.

*******

**ಪ್ರಸ್ತಾವನೆ:**

ಮೇಲೆ ಓದಲಾದ (1) ರಲ್ಲಿ 2020-21 ನೇ ಸಾಲಿನ ರಾಜ್ಯ ಆಯವ್ಯಯದ ಕಂಡಿಕೆ-114 ರಲ್ಲಿ ಮಾನ್ಯ ಮುಖ್ಯ ಮಂತ್ರಿಯವರು ಬೆಂಗಳೂರಿನ ಕೆ.ಸಿ.ಜನರಲ್ ಆಸ್ಪತ್ರೆ ಮತ್ತು ಸಿ.ವಿ.ರಾಮನ್ ಆಸ್ಪತ್ರೆಗಳಲ್ಲಿ ಹೃದಯರೋಗದ ಚಿಕಿತ್ಸೆಗಾಗಿ ಕ್ಯಾತ್ ಲ್ಯಾಬ್ ಅನ್ನು ಸಾರ್ವಜನಿಕ ಖಾಸಗಿ ಸಹಭಾಗಿತ್ವದೊಂದಿಗೆ ಸ್ಥಾಪಿಸಲಾಗುವುದು ಎಂದು ಘೋಷಿಸಿರುತ್ತಾರೆ.

ಮೇಲೆ ಓದಲಾದ (2) ರ ಪ್ರಸ್ತಾವನೆಯಲ್ಲಿ ಮಾನ್ಯ ಉಪ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ ಇವರು ಬೆಂಗಳೂರು ಉತ್ತರ ವಲಯದಲ್ಲಿ ಹೃದಯ ಚಿಕಿತ್ಸೆಗೆ ಸಂಬಂಧಿಸಿದಂತೆ ಯಾವುದೇ ಸರ್ಕಾರಿ ಸ್ವಾಮ್ಯದ ಆಸ್ಪತ್ರೆ ಇಲ್ಲದೆ ಇರುವುದರಿಂದ ಹಾಗೂ ರಾಜ್ಯದ ಉತ್ತರ ಭಾಗದಿಂದ ಬರುವ ಜನರಿಗೂ ಕೂಡ ಚಿಕಿತ್ಸೆಗೆ ತೊಂದರೆಯಾಗುತ್ತಿರುವ ಹಿನ್ನಲೆಯಲ್ಲಿ ಬೆಂಗಳೂರಿನ ಕೆ.ಸಿ.ಜನರಲ್ ಆಸ್ಪತ್ರೆಯಲ್ಲಿ ಒಂದು Cathlab ಹಾಗೂ ಹೃದಯ ಚಿಕಿತ್ಸೆಗೆ ಸಂಬಂಧಿಸಿದ ಘಟಕವನ್ನು ಸರ್ಕಾರದ ಆದೇಶ ಸಂಖ್ಯೆ:ಆಕುಕ 164 ಎಫ್.ಪಿ.ಇ 2020 ದಿ:21.08.2020 ರಲ್ಲಿ ಅನುಮೋದನೆ ನೀಡಿರುವ ರೂ. 13.19 ಕೋಟಿಗಳ ಅನುದಾನ ಪೈಕಿ ಬಾಕಿ ಇರುವ ಮೊತ್ತದಲ್ಲಿ ಸ್ಥಾಪನೆ ಮಾಡಲು ಅಗತ್ಯ ಕ್ರಮ ಕೈಗೊಳ್ಳಲು ಕೋರಿರುವುದಾಗಿ ತಿಳಿಸಿರುತ್ತಾರೆ.

ಅಂತೆಯೇ, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯವರು ದಿ:08.02.2020 ರಂದು ಕೆ.ಸಿ.ಜನರಲ್ ಆಸ್ಪತ್ರೆಯ 100 ಹಾಸಿಗೆಗಳ ಮಾಡ್ಯುಲರ್ ಐ.ಸಿ.ಯು ಕಟ್ಟಡದ ಉದ್ಘಾಟನಾ ಸಂದರ್ಭದಲ್ಲಿ, ಮಾನ್ಯ ಉಪಮುಖ್ಯಮಂತ್ರಿಯರವರ ಕೋರಿಕೆಯಂತೆ ಓ.ಪಿ.ಡಿ ಬ್ಲಾಕ್‌ನ ಮೂರನೇ ಮಹಡಿಯಲ್ಲಿ ಕ್ಯಾತ್ ಲಾಬ್ ಘಟಕವನ್ನು ನಿರ್ಮಿಸುವ ಬಗ್ಗೆ ಅಂದಾಜು ಪಟ್ಟಿಯನ್ನು ತಯಾರಿಸಿ ಸಲ್ಲಿಸಲು ಮೌಖಿಕವಾಗಿ ಸೂಚಿಸಿರುವುದಾಗಿ ತಿಳಿಸಿರುತ್ತಾರೆ.

ಈ ಹಿನ್ನಲೆಯಲ್ಲಿ, ಪ್ರಸ್ತಾಪಿತ ಕಾಮಗಾರಿಯನ್ನು 2018-19 ನೇ ಸಾಲಿನ ಲೋಕೋಪಯೋಗಿ ಇಲಾಖೆ, ಬೆಂಗಳೂರು ವೃತ್ತ ಹಾಗೂ 2019-20 ನೇ ಸಾಲಿನ ವಿದ್ಯುತ್ ದರಪಟ್ಟಿಯಂತೆ ರೂ.875.00 ಲಕ್ಷಗಳ ಅಂದಾಜು ಪಟ್ಟಿಯನ್ನು ತಯಾರಿಸಿದ್ದು, ಅಂದಾಜು ಪಟ್ಟಿಯಲ್ಲಿ ಈ ಕೆಳಕಂಡ ಅಂಶಗಳನ್ನು ಅಳವಡಿಸಿಕೊಂಡಿರುವುದಾಗಿ ತಿಳಿಸುತ್ತಾ, ಸದರಿ

ಕಾಮಗಾರಿಯನ್ನು ರೂ. 875.00 ಲಕ್ಷಗಳ ಅಂದಾಜು ಮೊತ್ತದಲ್ಲಿ (ಸರ್ಕಾರದ ಆದೇಶ ಸಂಖ್ಯೆ:ಆಕುಕ 164 ಎಫ್.ಪಿ.ಇ 2020 ದಿ:21.08.2020 ರಲ್ಲಿ ಅನುಮೋದನೆ ನೀಡಿರುವ ರೂ.12.19 ಕೋಟಿಗಳ ಅನುದಾನ ಪೈಕಿ ಉಳಿದ ರೂ. 8.00 ಕೋಟಿಗಳ ಅನುದಾನದಲ್ಲಿ) ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆಯನ್ನು ನೀಡುವಂತೆ ಕೋರಿರುತ್ತಾರೆ.

10. Construction of 3rd floor building over existing OPD block
11. Construction of Terrace -floor for utility area
12. Providing Medical Gas Pipe line work
13. Providing Water supply and sanitary works
14. Providing Internal Electrification works
15. Providing External Electrification works
16. Providing UPS and DG sets
17. Providing Elevators (Stretcher Lift)
18. Other allied works

ಸರ್ಕಾರದ ಆದೇಶ ಸಂಖ್ಯೆ: ಆಕುಕ 164 ಎಫ್.ಪಿ.ಇ 2020 ದಿ: 21.08.2020 ರಲ್ಲಿ ಕೆ.ಸಿ.ಜನರಲ್ ಆಸ್ಪತ್ರೆಯಲ್ಲಿ ಕೋವಿಡ್-19 ಸೋಂಕಿತರ ಚಿಕಿತ್ಸೆಗಾಗಿ 50x2 ಹಾಸಿಗೆಗಳ ಐ.ಸಿ.ಯು. ವಿಭಾಗವನ್ನು ಹೊಸದಾಗಿ ಪ್ರಾರಂಭಿಸಲು ಬೇಕಾಗುವ ಉಪಕರಣಗಳನ್ನು ಸರಬರಾಜು ಮಾಡಲು ಕೆ.ಎಸ್.ಡಿ.ಎಲ್.ಡಬ್ಲ್ಯೂ.ಎಸ್. ನಲ್ಲಿ ಲಭ್ಯವಿರುವ ರೂ. 12.19 ಕೋಟಿಗಳನ್ನು ಬಳಸಿಕೊಳ್ಳಲು ಅನುಮೋದನೆ ನೀಡಲಾಗಿರುತ್ತದೆ. ಸದರಿ ಅನುದಾನದಲ್ಲಿ ರೂ. 4.00 ಕೋಟಿ ವೆಚ್ಚದ ಉಪಕರಣಗಳನ್ನು ಖರೀದಿ ಮಾಡಲಾಗಿದ್ದು, ಇನ್ನೂ ಸುಮಾರು ರೂ. 8.00 ಕೋಟಿ ಅನುದಾನ ಉಳಿಕೆಯಾಗಿರುವುದಾಗಿ ಹಾಗೂ Equip Operate Management ಮಾದರಿಯಲ್ಲಿ ಕ್ಯಾತ್‌ಲ್ಯಾಬ್‌ಗೆ ಪೂರಕವಾದ ವೈದ್ಯಕೀಯ ಉಪಕರಣ, ಇತರೆ ಸಾಮಗ್ರಿ ಹಾಗೂ ಸಿಬ್ಬಂದಿಗಳನ್ನು ಶ್ರೀ ಜಯದೇವ ಹೃದ್ರೋಗ ಸಂಸ್ಥೆಯಿಂದಲೇ ನೀಡಲಾಗುವುದೆಂದು ತಿಳಿಸಿರುತ್ತಾರೆ.

ಪ್ರಧಾನ ಇಂಜಿನಿಯರ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಘಟಕ, ಬೆಂಗಳೂರು ಇವರ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಆಕುಕ 320 ಸಿಜಿಎಂ 2020**
**ಬೆಂಗಳೂರು, ದಿನಾಂಕ:15-3-2021**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಬೆಂಗಳೂರಿನ ಕೆ.ಸಿ.ಜನರಲ್ ಆಸ್ಪತ್ರೆಯಲ್ಲಿ ಶ್ರೀ ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆಯ ಸಹಭಾಗಿತ್ವದಲ್ಲಿ ಕ್ಯಾತ್‌ಲ್ಯಾಬ್ ಅನ್ನು ಸ್ಥಾಪಿಸಲು ಸಹಮತಿಸಿದೆ.

Equip Operate Management ಮಾದರಿಯಲ್ಲಿ ಕ್ಯಾತ್‌ಲ್ಯಾಬ್‌ಗೆ ಪೂರಕವಾದ ವೈದ್ಯಕೀಯ ಉಪಕರಣ, ಇತರೆ ಸಾಮಗ್ರಿ ಹಾಗೂ ಸಿಬ್ಬಂದಿಗಳ ವೆಚ್ಚವನ್ನು ಶ್ರೀ ಜಯದೇವ ಹೃದ್ರೋಗ ಸಂಸ್ಥೆಯಿಂದಲೇ ಭರಿಸತಕ್ಕದ್ದು.

ಬೆಂಗಳೂರಿನ ಕೆ.ಸಿ.ಜನರಲ್ ಆಸ್ಪತ್ರೆಯಲ್ಲಿ ಪ್ರಸ್ತುತ ಅಸ್ತಿತ್ವದಲ್ಲಿರುವ 3ನೇ ಮಹಡಿಯ ಹೊರರೋಗಿ ವಿಭಾಗದಲ್ಲಿ ಕ್ಯಾತ್‌ಲ್ಯಾಬ್ ಘಟಕದ ಕಾಮಗಾರಿಯನ್ನು ರೂ.875.00 ಲಕ್ಷಗಳ (ಎಂಟು ನೂರ ಎಪ್ಪತ್ತೈದು ಲಕ್ಷ ರೂಪಾಯಿಗಳು ಮಾತ್ರ) ಅಂದಾಜು ಮೊತ್ತದಲ್ಲಿ ನಿರ್ಮಾಣ

ಮಾಡಲು ಆಡಳಿತಾತ್ಮಕ ಅನುಮೋದನೆಯನ್ನು ನೀಡಿದೆ. ಅಂತೆಯೇ, ಯಾವುದೇ ಹೆಚ್ಚುವರಿ ಅನುದಾನ ಕೋರದಿರುವ ಷರತ್ತಿಗೊಳಪಟ್ಟಿರುತ್ತದೆ.

ಈ ಅಂದಾಜು ಮೊತ್ತದ ರೂ. 800 ಲಕ್ಷಗಳ ಅನುದಾನವನ್ನು Karnataka State Medical Supplies Corporation Ltd., ನಲ್ಲಿ ಲಭ್ಯವಿರುವ ಅನುದಾನದಿಂದ ಭರಿಸತಕ್ಕದ್ದು. ಇನ್ನುಳಿದಂತೆ, ರೂ. 75.00 ಲಕ್ಷಗಳನ್ನು ಮುಂದಿನ ಸಾಲಿನ ಆರ್ಥಿಕ ವರ್ಷದಲ್ಲಿ ಸೂಕ್ತ ಲೆಕ್ಕಶೀರ್ಷಿಕೆಯಡಿ ಅನುದಾನವನ್ನು ಕಲ್ಪಿಸಿಕೊಳ್ಳತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 46 ವೆಚ್ಚ-5/2021 ದಿನಾಂಕ: 12-3-2021 ರನ್ವಯ ಹಾಗೂ ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಪಿಡಿಎಸ್/08/ಎಂ.ಇ.ಡಿ./2021 ದಿ: 15-3-2021 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಪದ್ಮ ವಿ.) 15/3/2021
ಸರ್ಕಾರದ ಅಧೀನ ಕಾರ್ಯದರ್ಶಿ
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ಆರೋಗ್ಯ 1 ಮತ್ತು 2)

<u>ಇವರಿಗೆ:-</u>

1.ಪ್ರಧಾನ ಮಹಾಲೇಖಪಾಲರು (ಜಿ. & ಎಸ್ ಎಸ್ ಎ) / (ಇ ಆರ್ ಎಸ್.ಎ) ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ:5398, ಬೆಂಗಳೂರು-560 001.

2. ಪ್ರಧಾನ ಮಹಾಲೇಖಪಾಲರು (ಎ & ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ:5329, ಬೆಂಗಳೂರು-560 001.

3. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆರೋಗ್ಯ ಸೌಧ, ಮಾಗಡಿ ರಸ್ತೆ, ಬೆಂಗಳೂರು.

4. ಪ್ರಧಾನ ಅಭಿಯಂತರರು, ಇಂಜಿನಿಯರಿಂಗ್ ಘಟಕ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಆರೋಗ್ಯ ಸೌಧ, ಮಾಗಡಿ ರಸ್ತೆ, ಬೆಂಗಳೂರು.

5. ನಿರ್ದೇಶಕರು, ಶ್ರೀ ಜಯದೇವ ಹೃದ್ರೋಗ ಸಂಸ್ಥೆ, ಜಯನಗರ, ಬೆಂಗಳೂರು.

6. ನಿರ್ದೇಶಕರು, ಯೋಜನಾ ಇಲಾಖೆ (ಜನಶಕ್ತಿ ಮತ್ತು ಉದ್ಯೋಗ ವಿಭಾಗ), ಬಹುಮಹಡಿಗಳ ಕಟ್ಟಡ, ಬೆಂಗಳೂರು.

ನಿರ್ದೇಶಕರು, ಖಜಾನೆ ನಿರ್ದೇಶನಾಲಯ, ವಿ.ವಿ. ಗೋಪುರ, ಬೆಂಗಳೂರು.

7. ಮುಖ್ಯ ಹಣಕಾಸು ಅಧಿಕಾರಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆರೋಗ್ಯ ಸೌಧ, ಮಾಗಡಿ ರಸ್ತೆ, ಬೆಂಗಳೂರು.

8. ವೈದ್ಯಕೀಯ ಅಧೀಕ್ಷಕರು, ಕೆ.ಸಿ.ಜನರಲ್ ಆಸ್ಪತ್ರೆ, ಮಲ್ಲೇಶ್ವರಂ, ಬೆಂಗಳೂರು.

9. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-5), ವಿಧಾನ ಸೌಧ, ಬೆಂಗಳೂರು.

10. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆಕುಕ ಇಲಾಖೆರವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.

11. ಸರ್ಕಾರದ ಜಂಟಿ ಕಾರ್ಯದರ್ಶಿ ರವರ ಆಪ್ತ ಸಹಾಯಕರು, ಆಕುಕ ಇಲಾಖೆ, ವಿಕಾಸ ಸೌಧ, ಬೆಂಗಳೂರು.

12. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.